ದಿನಾಂಕ 23.08.2023 ರ ಆದೇಶದ ಮೇರೆಗೆ ಸಾಕ್ಷಿಯನ್ನು ಕರೆಯಿಸಿ ದಿನಾಂಕಃ 16-10-2023 ರಂದು ಸಾಕ್ಷಿಗೆ ಪುನಃ ಪ್ರಮಾಣ ವಚನ ಬೋಧಿಸಲಾಯಿತು.

(ಪಾಟೀ ಸವಾಲು: 1 ನೇ ಆರೋಪಿ ಪರ ವಕೀಲರು ಸಾಕ್ಷಿಯ ಪಾಟೀ ಸವಾಲಿಗೆ ಸಮಯ ಕೋರಿರುತ್ತಾರೆ. ಸಾಕ್ಷಿಯು ನಾನು ಈಗಾಗಲೇ ಎರಡು ಬಾರಿ ಸಾಕ್ಷ್ಯ ನುಡಿಯಲು ನ್ಯಾಯಾಲಯಕ್ಕೆ ಬಂದಿರುತ್ತೇನೆ ಪುನಃ ಬರಲು ನನಗೆ ಕಷ್ಟವಾಗುತ್ತದೆ ಇದೇ ದಿನ ಮುಗಿಸಿಕೊಡಿ ಎಂದು ನುಡಿದಿರುತ್ತಾರೆ. ಕಡತವನ್ನು ಪರಿಶೀಲಿಸಲಾಗಿ ಸಾಕ್ಷಿಯ ಮುಖ್ಯ ವಿಚಾರಣೆ ದಿನಾಂಕ 23.08.2023 ರಂದು ಮುಕ್ತಾಯಗೊಂಡಿದ್ದು ಆ ದಿನ ಆರೋಪಿ ಪರ ವಕೀಲರ ಕೋರಿಕೆಯ ಮೇರೆಗೆ ಸಾಕ್ಷಿಯ ಪಾಟೀ ಸವಾಲನ್ನು ಮುಂದೂಡಲಾಗಿರುತ್ತದೆ. ಈ ದಿನ ಸಹ 1 ನೇ ಆರೋಪಿ ಪರ ವಕೀಲರು ಪಾಟೀ ಸವಾಲಿಗೆ ಸಮಯ ಕೋರಿರುತ್ತಾರೆ. ಸಾಕ್ಷಿಯು ಮೇಲೆ ಹೇಳಿದಂತೆ ತಾನು ಪದೇ ಪದೇ ನ್ಯಾಯಾಲಯಕ್ಕೆ ಬರುವುದು ಕಷ್ಟವಾಗುತ್ತದೆ ಈ ದಿನವೇ ಮುಗಿಸಿಕೊಡಿ ಎಂದು ನುಡಿದಿರುತ್ತಾರೆ. ಮೇಲಾಗಿ 1 ನೇ ಆರೋಪಿ ಪರ ವಕೀಲರು ಸಾಕ್ಷಿಯ ಪಾಟೀ ಸವಾಲನ್ನು ಮುಂದೂಡಲು ಯಾವುದೇ ಸಕಾರಣ ನೀಡಿರುವುದಿಲ್ಲ. ಆ ಕಾರಣಕ್ಕೆ ಸಾಕ್ಷಿಯ ಪಾಟೀ ಸವಾಲು ಇಲ್ಲವೆಂದು ತೆಗೆದುಕೊಳ್ಳಲಾಯಿತು.)

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯ್ತು)

ಓ.ಹೇ.ಕೇ.ಸ.ಇ.ಎ.ಒ.

ಸಹಿ/-
(ಭಾನುಮತಿ ಬಿ.ಸಿ)
2 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಮಗಳೂರು.

ಸಾಕ್ಷಿಯ ಸಹಿ